ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ

ದಿನಾಂಕ : DATE : 21/3/2020

# ಪ್ರೊಬೇಷನರಿ ಹುದ್ದೆ: ಸಂಪುಟದಲ್ಲಿ ತೀರ್ಮಾನ

ಪ್ರಜಾವಾಣಿ ವಾರ್ತೆ 21-3-20

ಬೆಂಗಳೂರು: 2011ರ ಸಾಲಿನ ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳಿಗೆ ಆಯ್ಕೆಯಾದ ಅಭ್ಯರ್ಥಿಗಳ ಪಟ್ಟಿ ಬಗ್ಗೆ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನ ತೆಗೆದುಕೊಳ್ಳುವುದಾಗಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಭರವಸೆ ನೀಡಿದ್ದಾರೆ.

ವಿಧಾನಸಭೆಯಲ್ಲಿ ಗಮನ ಸೆಳೆಯುವ ಸೂಚನೆಗೆ ಉತ್ತರ ನೀಡಿದ ಅವರು, 'ನೇಮಕಾತಿಗಾಗಿ ಕಾಯುತ್ತಿರುವ ಅಭ್ಯರ್ಥಿಗಳ ಬಗ್ಗೆ ಅನುಕಂಪವಿದ್ದು ಸೂಕ್ತ ತೀರ್ಮಾನ ತೆಗೆದುಕೊಳ್ಳುತ್ತೇನೆ' ಎಂದು ಹೇಳಿದರು.

ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ಮಾತನಾಡಿ, ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲು ಸುಗ್ರೀವಾಜ್ಞೆ ಹೊರಡಿಸಬೇಕು. ಅದರಿಂದ ಮಾತ್ರ ಸಮಸ್ಯೆ ಬಗೆಹರಿಯಲು ಸಾಧ್ಯ ಎಂದರು.

ಸಚಿವ ಜೆ.ಸಿ.ಮಾಧುಸ್ವಾಮಿ ಮಾತನಾಡಿ, 'ಈ ಬಗ್ಗೆ ಸಾಮೂಹಿಕ ನಿರ್ಧಾರ ತೆಗೆದುಕೊಳ್ಳಬೇಕು. ಈ ಪ್ರಕರಣದಲ್ಲಿ ಯಾರ ಬಗ್ಗೆಯೂ ದೋಷಾರೋಪಣೆ ಮಾಡಿಲ್ಲ. ಯಾರು, ಯಾರಿಗೆ ಹಣ ಕೊಟ್ಟರು ಎಂಬುದರ ಬಗ್ಗೆಯೂ ಆರೋಪಗಳಿಲ್ಲ' ಎಂದರು.